# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 710 (672) |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿ.ಸ.ಚು) |
| ಉತ್ತರಿಸಬೇಕಾದ ದಿನಾಂಕ | : | 21.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿ ಕೈಗೊಂಡಿರುವ ಬೃಹತ್ ನೀರಾವರಿ ಯೋಜನೆಗಳು, ಕಾಲುವೆ ಜಾಲಗಳ ಅಭಿವೃದ್ಧಿ, ಜಲಾಶಯಗಳ ನಿರ್ಮಾಣ ಸೇತುವೆಗಳು ಹಾಗೂ ಇತರ ಮೂಲಸೌಕರ್ಯ ಕಾಮಗಾರಿಗಳ ಬಿಲ್ ಗಳನ್ನು ಗುತ್ತಿಗೆದಾರರಿಗೆ ಸಕಾಲದಲ್ಲಿ ಪಾವತಿಸದೇ ಇರುವುದರಿಂದ ರಾಜ್ಯಾದ್ಯಂತ ನೀರಾವರಿ ಕಾಮಗಾರಿಗಳು ಸಂಪೂರ್ಣ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="3">ಜಲಸಂಪನ್ಮೂಲ ಇಲಾಖೆಯಡಿ ಬರುವ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾವೇರಿ ನೀರಾವರಿ ನಿಗಮ ನಿಯಮಿತ ಮತ್ತು ವಿಶ್ವೇಶ್ವರಯ್ಯ ಜಲ ನಿಗಮಗಳಿಗೆ ಪ್ರತೀ ವರ್ಷ ಆಯವ್ಯಯದಲ್ಲಿ ಹಂಚಿಕೆ ಮಾಡುವ ಅನುದಾನದಲ್ಲಿ ಬಂಡವಾಳ ವೆಚ್ಚ ಹಾಗೂ ಇತರೆ ಲೆಕ್ಕಶೀರ್ಷಿಕೆ ಅಡಿಯಲ್ಲಿ ಕಾಮಗಾರಿಗಳಿಗೆ ಒದಗಿಸಿರುವ ಅನುದಾನವನ್ನು 1/12ನೇ ಆಧಾರದ ಮೇಲೆ ಪ್ರತಿ ಮಾಹೆ ಆಯಾ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಬಿಡುಗಡೆ ಮಾಡಲಾಗುತ್ತದೆ. ಅದನ್ನು ನಿಗಮಗಳು ಯೋಜನೆಯ ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರಿಗೆ ಬಿಲ್ಲುಗಳ ಪಾವತಿಗಾಗಿ ನಿಗದಿತವಾಗಿ ಬಿಡುಗಡೆ ಮಾಡಲಾಗುತ್ತಿದೆ. ಕಾಮಗಾರಿಗಳ ಬಿಲ್‌ಗಳನ್ನು ಗುತ್ತಿಗೆದಾರರಿಗೆ ಸಕಾಲದಲ್ಲಿ ಪಾವತಿಸದೇ, ನೀರಾವರಿ ಕಾಮಗಾರಿಗಳು ಸಂಪೂರ್ಣವಾಗಿ ಸ್ಥಗಿತಗೊಂಡಿರುವ ಪ್ರಕರಣಗಳು ವರದಿಯಾಗಿರುವುದಿಲ್ಲ.<br><br>ನಿಗಮಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿ/ ಯೋಜನೆಗಳಿಗೆ ಸಂಬಂಧಿಸಿದಂತೆ ಪಾವತಿಗೆ ಬಾಕಿ ಇರುವ ಬಿಲ್ಲುಗಳ ವಿವರ (ಜುಲೈ-2026 ರ ಅಂತ್ಯಕ್ಕೆ) ಈ ಕೆಳಕಂಡಂತಿದೆ:<br><br><table><tr><th>ನಿಗಮ</th><th>ಬಾಕಿ ಬಿಲ್ಲು ಮೊತ್ತ (ರೂ. ಕೋಟಿಗಳಲ್ಲಿ)</th></tr><tr><td>KBJNL</td><td>1,649.57</td></tr><tr><td>KNNL</td><td>4,696.86</td></tr><tr><td>CNNL</td><td>3,305.66</td></tr><tr><td>VJNL</td><td>5,777.42</td></tr><tr><td>ಒಟ್ಟು</td><td>15,429.51</td></tr></table></td></tr>
<tr><td>ಆ)</td><td>ಬಂದಿದ್ದಲ್ಲಿ ಕಳೆದ ಒಂದೂವರೆ ವರ್ಷದಿಂದ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಗೆ ಬರುವ ವಿವಿಧ ನಿಗಮಗಳಲ್ಲಿ (ಕೃಷ್ಣಾ ಭಾಗ್ಯ ಜಲ ನಿಗಮ, ಕಾವೇರಿ ನೀರಾವರಿ ನಿಗಮ, ಕರ್ನಾಟಕ ನೀರಾವರಿ ನಿಗಮ ಮತ್ತು ವಿಶ್ವೇಶ್ವರಯ್ಯ ಜಲ ನಿಗಮ) ಗುತ್ತಿಗೆದಾರರಿಗೆ ಪಾವತಿಸಬೇಕಿರುವ ಒಟ್ಟು ಬಾಕಿ ಮೊತ್ತವೆಷ್ಟು; ಸರ್ಕಾರದ ಬಳಿ ಬಂಡವಾಳ ವೆಚ್ಚಕ್ಕೆ (Capital Expenditure) ಅಗತ್ಯ ಅನುದಾನ ಇಲ್ಲದಿರುವುದರಿಂದಲೇ ಈ ಬಿಲ್‌ಗಳ ಪಾವತಿ ವಿಳಂಬವಾಗುತ್ತಿದೆಯೇ; (ಬಾಕಿ ಇರುವ ಬಿಲ್ ಮೊತ್ತದ ನಿಗಮವಾರು ಹಾಗೂ ಯೋಜನವಾರು ಸಂಪೂರ್ಣ ವಿವರ ಒದಗಿಸುವುದು)</td></tr>
<tr><td>ಇ)</td><td>ಸಕಾಲದಲ್ಲಿ ಹಣ ಪಾವತಿಯಾಗದ ಕಾರಣ ಗುತ್ತಿಗೆದಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಪ್ರಗತಿಯಲ್ಲಿರುವ ಬೃಹತ್ ನೀರಾವರಿ ಯೋಜನೆಗಳನ್ನು ಅರ್ಧಕ್ಕೆ ನಿಲ್ಲಿಸಿರುವುದು ನಿಜವೇ; ಇದರಿಂದಾಗಿ ರೈತರ ಕೃಷಿ ಭೂಮಿಗೆ ನೀರು ಒದಗಿಸುವ ಸರ್ಕಾರದ ಗುರಿಗೆ ಹಿನ್ನಡೆಯಾಗುತ್ತಿಲ್ಲವೇ, ಹಾಗೂ ಅಪೂರ್ಣಗೊಂಡ ಕಾಮಗಾರಿಗಳಿಂದಾಗಿ ಮಳೆಗಾಲದಲ್ಲಿ ಕಾಲುವೆಗಳು ಮತ್ತು ಸೇತುವೆಗಳು ಹಾನಿಗೀಡಾಗಿ ಸಾರ್ವಜನಿಕರಿಗೆ ಹಾಗೂ ರೈತರಿಗೆ ತೀವ್ರ ತೊಂದರೆಯಾಗುತ್ತಿರುವುದು ನಿಜವೇ (ಸಂಪೂರ್ಣ ಮಾಹಿತಿ ನೀಡುವುದು);</td></tr>
</table>

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಒಟ್ಟಾರೆ ಯೋಜನೆಗಳ ಪ್ರಗತಿಯ ಹಿತದೃಷ್ಟಿಯಿಂದ ಮತ್ತು ಮಾಹೆವಾರು ಒದಗಿಸುತ್ತಿರುವ ಅನುದಾನದಿಂದ ಕಾಮಗಾರಿಗಳನ್ನು ಸರಿದೂಗಿಸಿಕೊಂಡು ಹೋಗಲಾಗುತ್ತಿದ್ದು, ಆದ್ಯತೆ ಮೇರೆಗೆ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸಲು ಕ್ರಮಜರುಗಿಸಲಾಗುತ್ತಿದೆ. |
| ಈ) | ರಾಜ್ಯದಲ್ಲಿ ಸಂಪೂರ್ಣವಾಗಿ ಸ್ಥಗಿತಗೊಂಡಿರುವ ಭಾರಿ ನೀರಾವರಿ ಯೋಜನೆಗಳಿಗೆ ಮರುಜೀವ ನೀಡಲು ಹಾಗೂ ಗುತ್ತಿಗೆದಾರರಿಗೆ ಪಾವತಿಸಬೇಕಿರುವ ಸಾವಿರಾರು ಕೋಟಿ ರೂ.ಗಳ ಬಾಕಿ ಬಿಲ್‌ಗಳನ್ನು ವಿಲೇವಾರಿ ಮಾಡಲು ಸರ್ಕಾರ ರೂಪಿಸಿರುವ ಆರ್ಥಿಕ ಕ್ರಿಯಾಯೋಜನೆ (Action Plan) ಏನು; ಯಾವ ನಿರ್ದಿಷ್ಟ ಕಾಲಮಿತಿಯೊಳಗೆ (Time Frame) ಸಂಪೂರ್ಣ ಬಾಕಿ ಹಣವನ್ನು ಬಿಡುಗಡೆ ಮಾಡಿ, ರೈತರ ಹಿತದೃಷ್ಟಿಯಿಂದ ಈ ನೀರಾವರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ಆರ್ಥಿಕ ಇಲಾಖೆಯಿಂದ ಹೊರಡಿಸಲಾಗುವ ತ್ರೈಮಾಸಿಕ ಕಂತಿನ ಹಣ ಬಿಡುಗಡೆ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ವಯ ಪ್ರತಿ ವರ್ಷ ಆಯವ್ಯಯದಲ್ಲಿ ಹಂಚಿಕೆಯಾದ ಅನುದಾನವನ್ನು ಮಾಹೆವಾರು 1/12 ಅನುಪಾತದಂತೆ ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದೆ. ಸದರಿ ಮೊತ್ತವನ್ನು ಲೆಕ್ಕ ಶೀರ್ಷಿಕೆವಾರು ಬಾಕಿ ಬಿಲ್ಲುಗಳನ್ನು ಜೇಷ್ಠತೆ ಆಧಾರದ ಮೇಲೆ ಪಾವತಿಸಲು ಕ್ರಮವಹಿಸಲಾಗುತ್ತಿದೆ<br><br>ನಿಗಮಗಳಿಗೆ ಮಾಹೆವಾರು ಬಿಡುಗಡೆ ಮಾಡಲಾಗುವ ಅನುದಾನದಲ್ಲಿ ಯೋಜನೆಗಳ ಪ್ರಗತಿಯ ಹಿತದೃಷ್ಟಿಯಿಂದ ಆದ್ಯತೆ ಹಾಗೂ ಅನುದಾನ ಲಭ್ಯತೆಯನ್ನು ಪರಿಗಣನೆಗೆ ತೆಗೆದುಕೊಂಡು ಎಲ್ಲಾ ರೀತಿಯ ಕಾಮಗಾರಿಗಳ ಬಾಕಿ ಬಿಲ್ಲುಗಳನ್ನು ಪಾವತಿಸಲು ಕ್ರಮಜರುಗಿಸಲಾಗುತ್ತಿದೆ. |

**ಜಸಂಇ 97 ಎಂಎಲ್‌ಎ 2026**

**(ಎನ್. ಚಲುವರಾಯಸ್ವಾಮಿ)**
**ಜಲಸಂಪನ್ಮೂಲ ಸಚಿವರು**